ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಪಶು ವಿಶ್ವವಿದ್ಯಾಲಯಗಳಿಗೆ ಮಾನ್ಯ ಶಾಸಕರ ನಾಮನಿರ್ದೇಶನ ಮಾಡುವ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರರ ಕ್ಷೇತ್ರ):-

413(591) ಮಾನ್ಯ ಪಶುಸಂಗೋಪನೆ ಹಾಗೂ ಹಜ್ & ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಆಡಳಿತ ನಿರ್ವಹಣಾ ಮಂಡಳಿಗೆ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶನ ಮಾಡುತ್ತಿದ್ದರೂ ಸಹ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಈ ಅವಕಾಶ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ವಿಶ್ವವಿದ್ಯಾಲಯದ ಕಾಯ್ದೆಗೆ ತಿದ್ದುಪಡಿ ತರುವ ಬಗ್ಗೆ ಸರ್ಕಾರದ ನಿಲುವೇನು;

(ಇ) ವಿಶ್ವವಿದ್ಯಾಲಯದ ಕಾಯ್ದೆಗೆ ಯಾವ ಕಾಲಮಿತಿಯೊಳಗೆ ತಿದ್ದುಪಡಿ ತಂದು ಆಡಳಿತ ನಿರ್ವಹಣಾ ಮಂಡಳಿಯಲ್ಲಿ ಮಾನ್ಯ ಶಾಸಕರುಗಳಿಗೆ ಅವಕಾಶ ಕಲ್ಪಿಸಲಾಗುವುದು?